ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಜೂನ್ 30, 2020

# ಪತ್ರಿಕಾ ಪ್ರಕಟಣೆ

## ಗಣ್ಯರ ಒಡನಾಟ ಹಾಗೂ ರಾಜ್ಯದ ಅಭಿವೃದ್ಧಿಗೆ ಸಾಕ್ಷಿಯಾಗುವ ಸೌಭಾಗ್ಯ ತಂದುಕೊಟ್ಟ ವಾರ್ತಾ ಇಲಾಖೆಯಲ್ಲಿ ಸೇವೆ ಸಂತೃಪ್ತಿ ತಂದುಕೊಟ್ಟಿದೆ : ಹೆಚ್.ಬಿ.ದಿನೇಶ್

ಬೆಂಗಳೂರು, ಜೂನ್ 30 (ಕರ್ನಾಟಕ ವಾರ್ತೆ)

ಗಣ್ಯಾತಿಗಣ್ಯರೊಂದಿಗೆ ಒಡನಾಟ ಹೊಂದಿ. ರಾಜ್ಯದ ಅಭಿವೃದ್ಧಿಗೆ ಸಾಕ್ಷಿಯಾಗುವ ಸೌಭಾಗ್ಯವನ್ನು ತಂದುಕೊಟ್ಟ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿನ ತಮ್ಮ ಮೂರು ದಶಕಗಳ ಸೇವೆ ತಮಗೆ ಸಂತೃಪ್ತಿ ತಂದಿದೆ ಎಂದು ಆಡಳಿತ ವಿಭಾಗದ ಜಂಟಿ ನಿರ್ದೇಶಕರಾಗಿ ಇಲ್ಲಿ ಇಂದು ವಯೋ ನಿವೃತ್ತಿ ಹೊಂದಿದ ಹೆಚ್.ಬಿ.ದಿನೇಶ್ ಅವರು ತಮ್ಮ ಬೀಳ್ಕೊಡುಗೆ ಸಮಾರಂಭದಲ್ಲಿ ಮನಬಿಚ್ಚಿ ಮಾತನಾಡಿದರು.

ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ಪತ್ರಿಕೋದ್ಯಮದಲ್ಲಿ ಪದವಿ ಮತ್ತು ಮೈಸೂರು ವಿಶ್ವವಿದ್ಯಾಲಯದಲ್ಲಿ ಸ್ನಾತಕೋತ್ತರ ಪದವಿ ಪಡೆದ ನಂತರ ವಿವಿಧ ಪತ್ರಿಕೆಗಳಲ್ಲಿ ವರದಿಗಾರರಾಗಿ ಕಾರ್ಯನಿರ್ವಹಿಸಿದ್ದ ಹೆಚ್.ಬಿ.ದಿನೇಶ್ ಅವರು 1990 ರ ದಶಕದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾಗಿ ಸರ್ಕಾರಿ ಸೇವೆಯನ್ನು ಆರಂಭಿಸಿದ್ದರು.

ಕಳೆದ ಮೂರು ದಶಕಗಳ ತಮ್ಮ ಸರ್ಕಾರಿ ಸೇವೆಯಲ್ಲಿ ರಾಜ್ಯ ಕಂಡ ಅನೇಕ ಮುಖ್ಯಮಂತ್ರಿಗಳಿಗೆ ಮಾಧ್ಯಮ ಸಮನ್ವಯಾಧಿಕಾರಿ ಹಾಗೂ ಮಾಧ್ಯಮ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿದ ಹೆಗ್ಗಳಿಕೆ ಅವರದ್ದು. ಇಲಾಖಾ ವ್ಯಾಪ್ತಿಯ ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ಕರ್ನಾಟಕ ಚಲನಚಿತ್ರ ಅಕಾಡೆಮಿ ಕರ್ನಾಟಕ ಮದ್ಯಪಾನ ಸಂಯಮ ಮಂಡಳಿ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದರು. ಇಂದು ಕೇಂದ್ರ ಕಚೇರಿ ವಾರ್ತಾಸೌಧದಲ್ಲಿ ಹಮ್ಮಿಕೊಂಡಿದ್ದ ಸರಳ ಕಾರ್ಯಕ್ರಮದಲ್ಲಿ ಅವರನ್ನು ಸನ್ಮಾನಿಸಿ ಬೀಳ್ಕೊಡಲಾಯಿತು. ಈ ಸಮಯದಲ್ಲಿ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳು ಉಪಸ್ಥಿತರಿದ್ದರು.

ಛಾಯಾಚಿತ್ರ ಲಗತ್ತಿಸಿದೆ )

## ವರದಿ ಸಲ್ಲಿಕೆ

**ಬೆಂಗಳೂರು, ಜೂನ್ 30 (ಕರ್ನಾಟಕ ವಾರ್ತೆ)**

ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಈಗಿರುವ ಮೀಸಲಾತಿಯನ್ನು ಹೆಚ್ಚಿಸುವ ಬಗ್ಗೆ ಅಧ್ಯಯನ ಮಾಡಿ ವರದಿ ಸಲ್ಲಿಸಲು ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್‌ದಾಸ್ ಅವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ಆಯೋಗವನ್ನು ಸರ್ಕಾರವು ರಚಿಸಿತ್ತು. ಆಯೋಗವು ತನ್ನ ವರದಿಯನ್ನು ಮುಖ್ಯಮಂತ್ರಿಗಳಿಗೆ 02-07-2020 ರಂದು ಬೆಳಿಗ್ಗೆ 10-30 ಗಂಟೆಗೆ ವಿಧಾನ ಸೌಧ ಕಚೇರಿಯಲ್ಲಿ ಸಲ್ಲಿಸಲಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಜೂನ್ 30 (ಕರ್ನಾಟಕ ವಾರ್ತೆ)**

ಕಂದಾಯ ಸಚಿವ ಆರ್. ಅಶೋಕ್ ಅವರು ಜೂನ್ 30 ರಿಂದ ಜುಲೈ 2 ರವರೆಗೆ ಹಾಸನ ಹಾಗೂ ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಜುಲೈ 2 ರಂದೇ ಕೇಂದ್ರ ಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಜೂನ್ 30 (ಕರ್ನಾಟಕ ವಾರ್ತೆ)**

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವ ಜಗದೀಶ್ ಶೆಟ್ಟರ ಅವರು ಜುಲೈ 1 ಮತ್ತು 2 ರಂದು ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಜುಲೈ 2 ರಂದೇ ಕೇಂದ್ರ ಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ರಾಜ್ಯ ಮಟ್ಟದ ಪುಸ್ತಕ ಆಯ್ಕೆಗಾಗಿ ಅರ್ಜಿ ಆಹ್ವಾನ

**ಬೆಂಗಳೂರು, ಜೂನ್ 30 (ಕರ್ನಾಟಕ ವಾರ್ತೆ)**

ಸಾರ್ವಜನಿಕ ಗ್ರಂಥಾಲಯ ಇಲಾಖೆವತಿಯಿಂದ ಕಾಪಿರೈಟ್ ಮಾಡಿಸಿರುವ ಪುಸ್ತಕಗಳನ್ನು ಆಯ್ಕೆಗಾಗಿ ಅರ್ಜಿಯೊಂದಿಗೆ ಪುಸ್ತಕದ ಒಂದು ಪ್ರತಿಯನ್ನು ಹಾಗೂ ಡಿಜಿಟಲ್ ಗ್ರಂಥಾಲಯ ಸೇವೆಯನ್ನು ಸಾರ್ವಜನಿಕ ಓದುಗರಿಗೆ ಒದಗಿಸಲು ಅನುಕೂಲವಾಗುವಂತೆ ಆಸಕ್ತಿಯುಳ್ಳ ಲೇಖಕರು, ಲೇಖಕ-ಪ್ರಕಾಶಕರು, ಪ್ರಕಾಶಕರು ಮತ್ತು ಪ್ರಕಟಣಾ ಸಂಸ್ಥೆಗಳು ಪುಸ್ತಕವನ್ನು ಆಯ್ಕೆಗೆ ಅರ್ಜಿ ಆಹ್ವಾನಿಸಲಾಗಿದೆ.

ಪುಸ್ತಕ ಪ್ರತಿ ಸಲ್ಲಿಸುವಾಗ ತಮ್ಮ ಅನುಮತಿ ಪತ್ರದೊಂದಿಗೆ ಪುಸ್ತಕದ ಸಾಫ್ಟ್‌ಕಾಪಿಯನ್ನು ಸಿ.ಡಿ. ರೂಪದಲ್ಲಿ (PDF Format) ನಲ್ಲಿ ನಿರ್ದೇಶಕರು, ಸಾರ್ವಜನಿಕಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯಗೋಪುರ, 4ನೇ ಮಹಡಿ, ಡಾ.ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001 ಇಲ್ಲಿಗೆ ದಿನಾಂಕ: 31-07-2020 ರ ಒಳಗೆ ಸಲ್ಲಿಸುವುದು.

2020ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾದ (ದಿನಾಂಕ: 01-01-2020 ರಿಂದ 30-06-2020 ರ ವರೆಗೆ ಪ್ರಕಟಿತ ಪುಸ್ತಕಗಳು) ಪುಸ್ತಕಗಳನ್ನು ಗ್ರಂಥಸ್ವಾಮ್ಯ ವಿಭಾಗ, ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು ಬದಲಾಗಿ ಕೋವಿಡ್-19 ಹಿನ್ನಲೆಯಲ್ಲಿ ಕಬ್ಬನ್‌ಪಾರ್ಕ್‌ನಲ್ಲಿ ಸಾರ್ವಜನಿಕರ ಪ್ರವೇಶಕ್ಕೆ ನಿರ್ಭಂಧಿಸಿರುವುದರಿಂದ ಉಪ ನಿರ್ದೇಶಕರ ಕಛೇರಿ, ನಗರ ಕೇಂದ್ರ ಗ್ರಂಥಾಲಯ, ಪಶ್ಚಿಮ ವಲಯ, ಹಂಪಿನಗರ, ಬೆಂಗಳೂರು-560104 ಇಲ್ಲಿ ದಿನಾಂಕ: 30-07-2020 ರ ಒಳಗೆ ಕಾಪಿರೈಟ್ ಮಾಡಿಸಿರತಕ್ಕದ್ದು. ತದನಂತರ ಬಂದ ಯಾವುದೇ ಪುಸ್ತಕಗಳನ್ನು ಆಯ್ಕೆಗೆ ಸ್ವೀಕರಿಸಲಾಗುವುದಿಲ್ಲ.

ನಿಗದಿತ ಅರ್ಜಿ ನಮೂನೆ ಮತ್ತು ನಿಬಂಧನೆಗಳ ಮಾಹಿತಿಗಾಗಿ ಇಲಾಖಾ ಅಂತರ್ಜಾಲ www.karnatakapubliclibrary.gov.in ಹಾಗೂ ರಾಜ್ಯದ ಎಲ್ಲಾ ಜಿಲ್ಲಾ/ನಗರ ಕೇಂದ್ರ ಗ್ರಂಥಾಲಯಗಳ ಉಪ ನಿರ್ದೇಶಕರು, ಮುಖ್ಯ ಗ್ರಂಥಾಲಯಾಧಿಕಾರಿಗಳ ಕಛೇರಿಗಳಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಈ ಕಛೇರಿ ದೂರವಾಣಿ 080- 22864990, 22867358 ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

## ರೇರಾ ಪ್ರಾಧಿಕಾರದಲ್ಲಿ ಆನ್‌ಲೈನ್ ಮೂಲಕ ದೂರು ಸ್ವೀಕಾರ

ಬೆಂಗಳೂರು, ಜೂನ್ 30 (ಕರ್ನಾಟಕ ವಾರ್ತೆ)

ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ (ರೇರಾ) ದಾಖಲಾಗಿರುವ ದೂರುಗಳ ವಿಚಾರಣೆಯನ್ನು ನಡೆಸಲಾಗುತ್ತಿದೆ. ಇನ್ನು ಮುಂದೆ ಹೊಸ ದೂರುಗಳನ್ನು ಸಹ ಈ ಪ್ರಾಧಿಕಾರದಲ್ಲಿ ದಾಖಲಿಸಿಕೊಳ್ಳಲಾಗುತ್ತಿದೆ. ಈಗಾಗಲೇ ದಾಖಲಾದ ದೂರುಗಳು ವಿಚಾರಣೆ ಹಂತದಲ್ಲಿದೆ. ಆನ್‌ಲೈನ್‌ನಲ್ಲಿಯೂ ದೂರುಗಳನ್ನು ದಾಖಲಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ರೇರಾ ಪ್ರಾಧಿಕಾರದಲ್ಲಿ  ಎಲ್ಲವೂ ಆನ್‌ಲೈನ್

**ಬೆಂಗಳೂರು, ಜೂನ್ 30 (ಕರ್ನಾಟಕ ವಾರ್ತೆ)**

ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ ದಲ್ಲಿ ಇನ್ನು ಮುಂದೆ ಪ್ರಾಜೆಕ್ಟ್ ನೋಂದಣಿ, ಏಜೆಂಟ್ ನೋಂದಣಿ, ಪ್ರಾಜೆಕ್ಟ್‌ಗಳ ಮುಂದೂಡಿಕೆ/ತಿದ್ದುಪಡಿಗಳು, ದೂರುಗಳ ನೋಂದಣಿ ಹಾಗೂ ಪ್ರಾಜೆಕ್ಟ್‌ಗಳ ಕ್ರಮಬದ್ಧತೆ ಸೇವೆಗಲನ್ನು ಆನ್‌ಲೈನ್ ಮೂಲಕ ವ್ಯವಹರಿಸಬಹುದಾಗಿದೆ. ಪ್ರಸಕ್ತ ರೇರಾ ಪ್ರಾಧಿಕಾರದಲ್ಲಿ ತುರ್ತು ಸಂದರ್ಭದಲ್ಲಿ ಆನ್‌ಲೈನ್ ಮೂಲಕ ವಿಚಾರಣೆಯನ್ನು ವೀಡಿಯೋ ಸಂವಾದದ ಮೂಲಕ ನಡೆಸಲಾಗುವುದು.  ದೂರುಗಳು ಸಲ್ಲಿಸುವವರು ರೇರಾ ಕಚೇರಿಗೆ ಬರುವುದು ಅವಶ್ಯಕತೆ ಇರುವುದಿಲ್ಲ. ಮನೆಯಿಂದಲೇ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ, ವಿಚಾರಣೆ, ಪ್ರತಿವಾದಿಗಳ ಉತ್ತರ, ಪ್ರತ್ಯುತ್ತರ, ಅರ್ಜಿದಾರ ಹಾಗೂ ಫಿರ್ಯಾದುದಾರ ಇಬ್ಬರಿಗೂ ಉತ್ತರ ಇವುಗಳೆಲ್ಲಗಳನ್ನೂ, ತೀರ್ಪಿನ ಪ್ರತಿ ಆನ್‌ಲೈನ್ ಮೂಲಕವೇ ಪಡೆಯಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಖಾಸಗಿ ವೈದ್ಯಕೀಯ ಕಾಲೇಜುಗಳ ಆಸ್ಪತ್ರೆಗಳ ವ್ಯವಸ್ಥಾಪಕರು ವೈದ್ಯಾಧಿಕಾರಿಗಳೊಂದಿಗೆ ಸಭೆ

**ಬೆಂಗಳೂರು, ಜೂನ್ 30 (ಕರ್ನಾಟಕ ವಾರ್ತೆ)**

ಬೆಂಗಳೂರು, ಜೂನ್ 30:  ಇಂದು ಮಾನ್ಯ ಮುಖ್ಯಮಂತ್ರಿ ಶ್ರೀ ಬಿ.ಎಸ್. ಯಡಿಯೂರಪ್ಪ ಅವರು ವಿಧಾನಸೌಧದ ಸಮ್ಮೇಳನ ಸಭಾಂಗಣ ದಲ್ಲಿ ಕೋವಿಡ್-19 ಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ಖಾಸಗಿ ವೈದ್ಯಕೀಯ ಕಾಲೇಜುಗಳ ಆಸ್ಪತ್ರೆಗಳ ವ್ಯವಸ್ಥಾಪಕರು ಹಾಗೂ ವೈದ್ಯಾಧಿಕಾರಿಗಳೊಂದಿಗೆ ಚರ್ಚಿಸಲು ಸಭೆ ನಡೆಸಿ ನಂತರ ಮಾಧ್ಯಮದವರಿಗೆ ಪ್ರತಿಕ್ರಿಯೆ ನೀಡಿದರು.

ಬೆಂಗಳೂರಿನಲ್ಲಿ ಎರಡು ಸರ್ಕಾರಿ ಸಂಸ್ಥೆಗಳಲ್ಲಿ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗಿದೆ. ಪ್ರಸ್ತುತ ನಗರದ 11 ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ 2200 ಹಾಸಿಗೆಗಳನ್ನು ಅಧಿಸೂಚಿಸಲಾಗಿದೆ. ಆದರೆ ಪ್ರಸ್ತುತ ವರದಿಯಾಗುತ್ತಿರುವ ಪ್ರಕರಣಗಳನ್ನು ಗಮನಿಸಿದರೆ, 4500 ಹಾಸಿಗೆಗಳನ್ನು ಖಾಸಗಿ ಕಾಲೇಜುಗಳಿಂದ ಸರ್ಕಾರ ನಿರೀಕ್ಷಿಸುತ್ತಿದೆ. ಕಳೆದ ನಾಲ್ಕು ತಿಂಗಳಿಂದ ಹತ್ತು ವೈದ್ಯಕೀಯ ಕಾಲೇಜುಗಳು ಹೊರತು ಪಡಿಸಿ, ಇತರ ಎಲ್ಲ ಕಾಲೇಜುಗಳು ಪ್ರಯೋಗಾಲಯ ವ್ಯವಸ್ಥೆ ಮಾಡಿವೆ.

ಸರ್ಕಾರಿ ಕಾಲೇಜುಗಳಲ್ಲಿ 2000 ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ 4500 ಸೇರಿದಂತೆ ಸುಮಾರು 6500 ಹಾಸಿಗೆಗಳು ಬೆಂಗಳೂರಿನ ವೈದ್ಯಕೀಯ ಕಾಲೇಜುಗಳಲ್ಲಿಯೇ ಲಭ್ಯವಾಗುತ್ತಿವೆ. ಇದಕ್ಕೆ ಖಾಸಗಿ ವೈದ್ಯಕೀಯ ಕಾಲೇಜುಗಳು ಸಹಕರಿಸುವಂತೆ ಮನವಿ ಮಾಡಿದರು.

ವೈದ್ಯಕೀಯ ಕಾಲೇಜುಗಳು ಸರ್ಕಾರದೊಂದಿಗೆ ಕೈಜೋಡಿಸಿ, ಕೋವಿಡ್ ಚಿಕಿತ್ಸೆಗೆ ಸಹಕರಿಸುವ ಭರವಸೆಯನ್ನು ನೀಡಿದರು. ಇದಕ್ಕೆ ಸಿದ್ದತೆಗಳು ಮಾಡಿಕೊಳ್ಳಬೇಕಾಗಿರುವುದರಿಂದ ಹಂತ ಹಂತವಾಗಿ ವ್ಯವಸ್ಥೆ ಮಾಡುವುದಾಗಿ ತಿಳಿಸಿದರು.

ಕೋವಿಡ್ ಚಿಕಿತ್ಸೆ ನೀಡುವ ಖಾಸಗಿ ವೈದ್ಯಕೀಯ ಮತ್ತು ಅರೆ ವೈದ್ಯಕೀಯ ಸಿಬ್ಬಂದಿಗೆ ಕೂಡ ವಿಮಾ ಸೌಲಭ್ಯ ಒದಗಿಸಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಕೋವಿಡ್ ರೋಗಿಗಳಿಗೆ ಹಾಸಿಗೆ ಹಂಚಿಕೆ ಕುರಿತಂತೆ ಕೇಂದ್ರೀಕೃತ ವ್ಯವಸ್ಥೆಯನ್ನು ಈಗಾಗಲೇ ಬಿಬಿಎಂಪಿ ಯಲ್ಲಿ ಮಾಡಲಾಗಿದ್ದು, ಎರಡು ಮೂರು ದಿನಗಳಲ್ಲಿ ಪೂರ್ಣಪ್ರಮಾಣದಲ್ಲಿ ಕಾರ್ಯನಿರ್ವಹಿಸಲಿದೆ. ಕೋವಿಡ್ ಚಿಕಿತ್ಸೆ ನೀಡುವ ಎಲ್ಲ ಆಸ್ಪತ್ರೆಗಳನ್ನು ಈ ವ್ಯವಸ್ಥೆಯ ವ್ಯಾಪ್ತಿಗೆ ತರಲಾಗುವುದು ಎಂದು ಸ್ಪಷ್ಟಪಡಿಸಿದರು. ಖಾಸಗಿಯವರೊಂದಿಗೆ ಸಮನ್ವಯಕ್ಕೆ ಸಮಿತಿ ರಚನೆ ಮಾಡಲಾಗುವುದು. ಇದಲ್ಲದೆ ಟೆಲಿಮೆಡಿಸಿನ್ ಮೂಲಕ ಚಿಕಿತ್ಸೆ ನೀಡಲು ಸಹ ಕ್ರಮ ವಹಿಸಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು. ಇದಲ್ಲದೆ ಕೋವಿಡ್ ಕೇರ್ ಸೆಂಟರ್ ಗಳಿಗೆ ಅಗತ್ಯ ಸಿಬ್ಬಂದಿ ಒದಗಿಸುವಂತೆ ಮನವಿ ಮಮಾಡಿದರು.
ಸಭೆಯಲ್ಲಿ ಉಪ ಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ, ಕಂದಾಯ ಸಚಿವ ಆರ್. ಅಶೋಕ್, ಗೃಹ ಸಚಿವ ಬಸವರಾಜ ಬೊಮ್ಮಾಯಿ ವೈದ್ಯಕೀಯ ಶಿಕ್ಷಣ ಸಚಿವ ಡಾ. ಸುಧಾಕರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್ ಮತ್ತು ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಪಕ್ಷಾಂತರ ನಿಷೇಧ ಕಾನೂನಿಗೆ ಸಕಾರಾತ್ಮಕ ಬದಲಾವಣೆಗೆ ಪ್ರಯತ್ನ

ಬೆಂಗಳೂರು, ಜೂನ್ 30 (ಕರ್ನಾಟಕ ವಾರ್ತೆ)

ಪಕ್ಷಾಂತರ ನಿಷೇಧ ಕಾನೂನಿನ ಪ್ರಸ್ತಾಪಿತ ಬದಲಾವಣೆ ಹಾಗೂ ಮತ್ತಷ್ಟು ಬಿಗಿಗೊಳಿಸುವ ದೃಷ್ಟಿಯಿಂದ ವಿವಿಧ ಕ್ಷೇತ್ರದ ತಜ್ಞರುಗಳಿಂದ ಅಭಿಪ್ರಾಯಗಳನ್ನು ಕ್ರೋಢೀಕರಿಸಿ ರಾಷ್ಟ್ರೀಯ ಸಮಿತಿಯ ಮುಂದೆ ಸಮರ್ಪಕವಾಗಿ ಮಂಡಿಸಿ ಕರ್ನಾಟಕದ ಪ್ರತಿನಿಧಿಯಾಗಿ ಪಕ್ಷಾಂತರ ನಿಷೇಧ ಕಾನೂನಿಗೆ ಸಕಾರಾತ್ಮಕ ಬದಲಾವಣೆಗಳನ್ನು ತರುವಲ್ಲಿ ಸಕಲ ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದು ಸಭಾಧ್ಯಕ್ಷರು ತಿಳಿಸಿದ್ದಾರೆ.

ಸಂವಿಧಾನದ ಹತ್ತನೆಯ ಅನುಸೂಚಿಯ ಅಡಿಯಲ್ಲಿ ಪೀಠಾಸೀನಾಧಿಕರಿಗಳ ಅಧಿಕಾರಗಳು ಹಾಗೂ ಅದರ ಅಡಿಯಲ್ಲಿ ರಚಿಸಲಾದ ನಿಯಮಗಳ ಮರು ಪರಿಶೀಲನೆ ಕುರಿತು ಲೋಕಸಭಾಧ್ಯಕ್ಷರಿಂದ ರಚಿಸಲ್ಪಟ್ಟ ಸಭಾಧ್ಯಕ್ಷರುಗಳ ಸಮಿತಿಯ ಸದಸ್ಯರು ಹಾಗೂ ಕರ್ನಾಟಕ ವಿಧಾನ ಸಭೆಯ ಸಭಾಧ್ಯಕ್ಷರಾದ ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ದಿನಾಂಕ 25-06-2020 ಮತ್ತು 26-06-2020 ದಿನಗಳಂದು ಕರ್ನಾಟಕ ಸರ್ಕಾರದ ಹಿಂದಿನ ಅಡ್ವಕೇಟ್ ಜನರಲ್ ರವರಾದ ಶ್ರೀ ಉದಯ ಹೊಳ್ಳ, ಶ್ರೀ ಅಶೋಕ್ ಹಾರ್ನಹಳ್ಳಿ

ಶ್ರೀ ರವಿವರ್ಮಕುಮಾರ್ ಮತ್ತು ಶ್ರೀ ಮಧುಸೂಧನ್ ನಾಯಕ್ ಅವರುಗಳೊಂದಿಗೆ ಸದರಿ ವಿಷಯದ ಮೇಲೆ ಚರ್ಚಿಸಿ ಅವರುಗಳ ಅಭಿಪ್ರಾಯವನ್ನು ಪಡೆದಿರುತ್ತಾರೆ.

ಅಲ್ಲದೆ ಈ ಬಗ್ಗೆ ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರು ಹಾಗೂ ಕರ್ನಾಟಕ ಹಿಂದಿನ ಲೋಕಾಯುಕ್ತರಾದ ನ್ಯಾಯಮೂರ್ತಿ ಎನ್. ಸಂತೋಷ್ ಹೆಗ್ಡೆ ಮತ್ತು ಹಿಂದಿನ ಅಡ್ವಕೇಟ್ ಜನರಲ್ ರಾದ ಶ್ರೀ ಬಿ.ವಿ. ಆಚರ್ಯ ಅವರ ಲಿಖಿತ ಅಭಿಪ್ರಾಯವನ್ನು ಸಹ ಪಡೆದಿರುತ್ತಾರೆ. ಈ ದಿಸೆಯಲ್ಲಿ ಸಭಾಧ್ಯಕ್ಷರು ಇನ್ನೂ ಹಲವು ಕಾನೂನು ತಜ್ಞರ ಹಾಗೂ ಆಸಕ್ತ ಸಾರ್ವಜನಿಕರ ಅಭಿಪ್ರಾಯಗಳನ್ನು ಸಹ ಪಡೆದಿರುತ್ತಾರೆ.

## ಆನ್‌ಲೈನ್ ಮೂಲಕ ಮಧ್ಯಸ್ಥಿಕೆ ಪ್ರಕ್ರಿಯೆ

**ಬೆಂಗಳೂರು, ಜೂನ್ 30, 2020 (ಕರ್ನಾಟಕ ವಾರ್ತೆ):**

ವಿಶ್ವ ಆರೋಗ್ಯ ಸಂಸ್ಥೆ 'ಕೋವಿಡ್ –19'ನ್ನು 'ಸಾಂಕ್ರಾಮಿಕ ರೋಗ (ಪಿಡುಗು)' ಎಂದು ಘೋಷಿಸಿರುವ ಹಿನ್ನೆಲೆಯಲ್ಲಿ ಕಛೇರಿ ಸಿಬ್ಬಂದಿ ವರ್ಗ/ ಮಧ್ಯಸ್ಥಿಕೆದಾರರ / ಸಾರ್ವಜನಿಕರ / ವಕೀಲರ / ಪಕ್ಷಗಾರರ (ಕಕ್ಷಿದಾರರ) ಸುರಕ್ಷತೆಯ ಹಿತದೃಷ್ಟಿಯಿಂದ ಬೆಂಗಳೂರು ಮಧ್ಯಸ್ಥಿಕೆ ಕೇಂದ್ರವು ಆನ್‌ಲೈನ್‌ನಲ್ಲಿ ಮಧ್ಯಸ್ಥಿಕೆ ಪ್ರಕ್ರಿಯೆಯನ್ನು ಪ್ರಾರಂಭಿಸುವುದು ಸೂಕ್ತವೆಂದು ಪರಿಗಣಿಸಿ, ದಿನಾಂಕ 01–06–2020 ರಿಂದ ಆನ್‌ಲೈನ್ (ವಿಡಿಯೋ ಕಾನ್ಫರೆನ್ಸ್) ಮೂಲಕ ಮಧ್ಯಸ್ಥಿಕೆ ಪ್ರಕ್ರಿಯೆಯನ್ನು ಪ್ರಾರಂಭಿಸಿದೆ.

ಈ ನಿಟ್ಟಿನಲ್ಲಿ ಆನ್‌ಲೈನ್ ಮಧ್ಯಸ್ಥಿಕೆ ಪ್ರಕ್ರಿಯೆಗೆ ಒಪ್ಪಿಗೆಯಿರುವ ವಕೀಲರು / ಪಕ್ಷಗಾರರು ಕೆಳಕಂಡ ಮಧ್ಯಸ್ಥಿಕೆ ಕೇಂದ್ರದ ಇಮೇಲ್‌ಗೆ ತಮ್ಮ ಕೇಸ್ ನಂಬರ್ (ದಾವೆ ಸಂಖ್ಯೆ), ಪಕ್ಷಗಾರರ ಮತ್ತು ವಕೀಲರ ಇಮೇಲ್ ಐಡಿ ಹಾಗೂ ತಮ್ಮ ಮೊಬೈಲ್ ನಂಬರ್‌ಗಳನ್ನು ಕಳುಹಿಸಿದಲ್ಲಿ, ಮಧ್ಯಸ್ಥಿಕೆ ಕೇಂದ್ರವು ಆ ಕೇಸಿನ ಆನ್‌ಲೈನ್ ಮಧ್ಯಸ್ಥಿಕೆ ಪ್ರಕ್ರಿಯೆಯ ದಿನ ಮತ್ತು ಸಮಯವನ್ನು ನಿಗದಿಪಡಿಸಿ ಇಮೇಲ್ ಐಡಿ – **bmconlinemediation@gmail.com**ತಮಗೆ ಇಮೇಲ್ / ದೂರವಾಣಿ ಮೂಲಕ ತಿಳಿಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Online Mediation

Bengaluru June 30 (Karnataka Information)

In view of declaration of Covid-19 as "Pandemic" by World Health Organization (WHO) and also in the view of safety of BMC Staff and Mediators,

Advocates/Parties and Public, Bangalore Mediation Centre has started Online Mediation (Video Conference) from 01-06-2020. The concerned advocates/parties, who are willing to participate in Online Mediation, can send email-id of Bangalore Mediation Centre by furnishing their case number, Email-ID of the parties and advocates along with mobile number, in further this office will communicate the date and time of the online mediation through Email/Phone to their concerned. Email ID : bmconlinemediation@gmail.com says official press release.

## ಪ್ರಧಾನ ಮಂತ್ರಿಗಳ ಭಾಷಣಕ್ಕೆ ಮುಖ್ಯಮಂತ್ರಿಯವರ ಪ್ರತಿಕ್ರಿಯೆ

**ಬೆಂಗಳೂರು, ಜೂನ್ 30, 2020 (ಕರ್ನಾಟಕ ವಾರ್ತೆ):**

ಇಂದು ದೇಶದ ಪ್ರಧಾನ ಮಂತ್ರಿಗಳು ರಾಷ್ಟ್ರವನ್ನುದ್ದೇಶಿಸಿ ಮಾಡಿದ ಭಾಷಣದಲ್ಲಿ ದೇಶವು ಇತರೆ ದೇಶಗಳಿಗೆ ಹೋಲಿಸಿದಲ್ಲಿ ಕೋವಿಡ್ –19 ನಿಯಂತ್ರಣದಲ್ಲಿ ಉತ್ತಮ ಸ್ಥಿತಿಯಲ್ಲಿರುತ್ತದೆ ಎಂದು ತಿಳಿಸಿರುತ್ತಾರೆ.

ಇದಕ್ಕೆ ಲಾಕ್ ಡೌನ್ ಅವಧಿಯಲ್ಲಿ ರಾಷ್ಟ್ರದ ಜನತೆ ಲಾಕ್ ಡೌನ್ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿರುವುದು ಪ್ರಮುಖ ಕಾರಣವೆದು ತಿಳಿಸಿ ಅನ್ ಲಾಕ್ –1 ರ ಅವಧಿಯಲ್ಲಿ ನಿಯಮಗಳ ಬಗ್ಗೆ ಹೆಚ್ಚಿನ ಗಮನ ನೀಡದಿರುವುದು ಆತಂಕದ ಸಂಗತಿಯಾಗಿದೆ ಎಂದು ತಿಳಿಸಿರುತ್ತಾರೆ.

ಈ ಬಗ್ಗೆ ಜನರು ಎಚ್ಚೆತ್ತುಕೊಂಡು ನಿಯಮಗಳನ್ನು ಪಾಲಿಸಿ ಸಂವೇದನಾಶೀಲತೆಯಿಂದ ತೀರ್ಮಾನ ತೆಗೆದುಕೊಳ್ಳುವುದರಿಂದ ಉತ್ತಮ ಫಲಿತಾಂಶ ದೊರೆಯುತ್ತದೆಂಬ ಆಶಾಭಾವನೆಯನ್ನು ವ್ಯಕ್ತಪಡಿಸಿರುತ್ತಾರೆ.

ಲಾಕ್ ಡೌನ್ ಅವಧಿಯಲ್ಲಿ ಜಾರಿಗೆ ತಂದ ಗರೀಬ್ ಕಲ್ಯಾಣ ಅನ್ನ ಯೋಜನೆಯನ್ವಯ ದೇಶದ 80 ಕೋಟಿ ಜನಸಂಖ್ಯೆಗೆ ಏಪ್ರಿಲ್‌ನಿಂದ ಜೂನ್ ಮಾಹೆವರೆಗೆ ಪ್ರತಿ ಮಾಹೆ ಪ್ರತಿ ವ್ಯಕ್ತಿಗೆ 5 ಕೆ.ಜಿ. ಯಂತೆ ಅಕ್ಕಿ/ ಗೋಧಿ ಹಾಗೂ ಪ್ರತಿ ಕುಟುಂಬಕ್ಕೆ 1 ಕೆ.ಜಿ. ಬೇಳೆಯನ್ನು ಉಚಿತವಾಗಿ ನೀಡಲಾಗಿತ್ತು.

ಇಂದಿನ ಪರಿಸ್ಥಿತಿಯನ್ನು ಮನಗಂದು ಬಡವರಿಗೆ ಉಚಿತವಾಗಿ ಆಹಾರ ನೀಡುವ ಯೋಜನೆಯನ್ನು ಮುಂದಿನ 5 ತಿಂಗಳು ಅಂದರೆ ಜುಲೈ ಮಾಹೆಯಿಂದ ನವೆಂಬರ್ ಅಂತ್ಯದವರೆಗೆ ಮುಂದುವರೆಸಲು ಘೋಷಿಸಿರುತ್ತಾರೆ. ಈ ಯೋಜನೆಗೆ ರೂ. 90 ಸಾವಿರ ಕೋಟಿ ವೆಚ್ಚವಾಗಲಿದ್ದು, ಕಳೆದ ಮೂರು ತಿಂಗಳಲ್ಲಿ ಭರಿಸಿದ ವೆಚ್ಚ ರೂ. 60 ಸಾವಿರ ಸೇರಿ ಒಟ್ಟು ರೂ. 1.50 ಲಕ್ಷ ಕೋಟಿ ಗರೀಬ್ ಕಲ್ಯಾಣ ಅನ್ನ ಯೋಜನೆಗೆ ಒದಗಿಸಿರುವುದು ಅಭಿನಂದನಾರ್ಹ ಸಂಗತಿಯಾಗಿದೆ.

ಒಂದು ದೇಶ ಒಂದು ಪಡಿತರ (**One Nation One Ration**) ಯೋಜನೆಯನ್ನು ಜಾರಿಗೆ ತಂದಿರುವುದು ಸಂತೋಷದಾಯಕವಾದ ಸಂಗತಿಯಾಗಿರುತ್ತದೆ.

ಸ್ವಾವಲಂಭಿ ಭಾರತ ನಿರ್ಮಾಣದ ಬಗ್ಗೆ ಮತ್ತೊಮ್ಮೆ ಪುನರುಚ್ಚರಿಸುತ್ತಾ, ದೇಶದಲ್ಲಿ ಹಿಂದುಳಿದವರ, ಬಡವರ ಸಬಲೀಕರಣಕ್ಕಾಗಿ ಆರ್ಥಿಕ ಚಟುವಟಿಕೆಗಳನ್ನು ಮುಂದುವರೆಸುವ ಘೋಷಣೆ ಮಾಡಿರುತ್ತಾರೆ.

ಸಂಕಷ್ಟದ ಸಮಯದಲ್ಲಿ ದೇಶಕ್ಕೆ ಅನ್ನ ನೀಡಿದ ರೈತರನ್ನು, ಸಮಯಕ್ಕೆ ಸರಿಯಗಿ ತೆರಿಗೆ ಪಾವತಿಸಿದ ತೆರಿಗೆದಾರರನ್ನು ಅಭಿನಂದಿಸಿದ ಮಾನ್ಯ ಪ್ರಧಾನ ಮಂತ್ರಿಯವರು ದೇಶದ ಎಲ್ಲರೂ ಆರೋಗ್ಯವಾಗಿರಬೇಕೆಂದು ಬಯಸಿ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳಲು ಹಾಗೂ ಮುಖಗವಸು (ಮಾಸ್ಕ್) ತಪ್ಪದೇ ಬಳಸಲು ವಿನಂತಿಸಿರುತ್ತಾರೆ.

ಇದಕ್ಕಾಗಿ ನಾನು ಮಾನ್ಯ ಪ್ರಧಾನ ಮಂತ್ರಿಯವರುನ್ನು ಅಭಿನಂದಿಸುತ್ತೇನೆ. ಹಾಗೂ ಅವರ ಕರೆಯಂತೆ ಎಲ್ಲರೂ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಅಂತರವನ್ನು ಕಾಯ್ದುಕೊಂದು ಮಾಸ್ಕ್‌ನ್ನು ಬಳಸಿ ಆರೋಗ್ಯವನ್ನು ಕಾಪಾಡಿಕೊಂಡು ಕೋವಿಡ್ – ವೈರಾಣುವನ್ನು ನಿಯಂತ್ರಣಕ್ಕೆ ತರಲು ಒಟ್ಟಾಗಿ ಹೋರಾಡೋಣ

## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ನೇಮಕಾತಿ ಪ್ರಕ್ರಿಯೆ ಜಾಗರೂಕರಾಗಿರಲು ಮನವಿ

ಬೆಂಗಳೂರು, ಜೂನ್ 30, 2020 (ಕರ್ನಾಟಕ ವಾರ್ತೆ):

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಸಹಾಯಕ ತಾಂತ್ರಿಕ ಹುದ್ದೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ನಿಯೋಜನೆ ಆದೇಶ ಹೊರಡಿಸಿರುವುದಾಗಿ ಸಾಮಾಜಿಕ ಜಾಲತಾಣವಾದ ವಾಟ್ಸ್ ಆಪ್‌ನಲ್ಲಿ ಹರಿದಾಡುತ್ತಿರುತ್ತದೆ. ದೇಶವ್ಯಾಪಿ ಕೋವಿಡ್–19 ಸಾಂಕ್ರಾಮಿಕ ರೋಗ ಹರಡುತ್ತಿರುವ ಹಿನ್ನಲೆಯಲ್ಲಿ ಜಾಹೀರಾತು ಸಂಖ್ಯೆ 1/2018 ರಲ್ಲಿ ತಾಂತ್ರಿಕ ಸಹಾಯಕ ಹುದ್ದೆಗಳ ಮತ್ತು ಜಾಹೀರಾತು ಸಂಖ್ಯೆ 2/2018 ರಲ್ಲಿ ಕರಾಸಾ ಪೇದೆ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದ ಎಲ್ಲಾ ಪ್ರಕ್ರಿಯೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ.

ನಿಗಮದಲ್ಲಿ ಜಾಹೀರಾತು ಸಂಖ್ಯೆ 1/2016 ರನ್ವಯ ಹೊರಡಿಸಲಾಗಿದ್ದ ಸಹಾಯಕ ಸಂಚಾರ ನಿರೀಕ್ಷಕ ಹುದ್ದೆಗಳ ನೇಮಕಾತಿಯು ಪೂರ್ಣಗೊಂಡಿದ್ದು, ಆಯ್ಕೆಯಾಗಿರುವ ಅಭ್ಯರ್ಥಿಗಳನ್ನು ನಿಗಮದ ವಿವಿಧ ವಿಭಾಗಗಳಲ್ಲಿ ತರಬೇತಿಗಾಗಿ ಈಗಾಗಲೇ ನಿಯೋಜನೆ ಮಾಡಲಾಗಿರುತ್ತದೆ. ಪ್ರಸ್ತುತ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಯಾವುದೇ ನೇಮಕಾತಿ ಪ್ರಕ್ರಿಯೆಗಳು ನಡೆಯುತ್ತಿರುವುದಿಲ್ಲ. ಇಂತಹ ನಕಲಿ ಆದೇಶಗಳ ಬಗ್ಗೆ ಸಾರ್ವಜನಿಕರು ಎಚ್ಚರದಿಂದಿರುವಂತೆ ಕೋರಲಾಗಿದೆ. ನಿಗಮದಲ್ಲಿ ಯಾವುದೇ ಹುದ್ದೆ ಕೊಡಿಸುವುದಾಗಿ ಯಾರಾದರೂ ಆಮಿಷವೊಡ್ಡಿದಲ್ಲಿ ಈ ಬಗ್ಗೆ ಮೊಬೈಲ್ ದೂರವಾಣಿ ಸಂಖ್ಯೆ 7760990051 ಮತ್ತು 7760990095 ಗಳಿಗೆ ಸಂಪರ್ಕಿಸಿ ಮಾಹಿತಿ ನೀಡಬಹುದಾಗಿರುತ್ತದೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ನೇಮಕಾತಿಗಳಿಗೆ ಸಂಬಂಧಿಸಿದ ಎಲ್ಲಾ ಮಾಹಿತಿಯನ್ನು ನಿಗಮದ ವೆಬ್‌ಸೈಟ್ **www.ksrtcjobs.com** ರಲ್ಲಿ ಪ್ರಕಟಿಸಲಾಗುತ್ತದೆ.